# ಮುಖ್ಯ ನ್ಯಾಯಮೂರ್ತಿಗಳಿಗೆ ಸ್ವಾಗತ

ಉ.ವಾ 28/5/19

ಬೆಂಗಳೂರು: ಕರ್ನಾಟಕದ ಹೈಕೋರ್ಟ್ ಹಾಗೂ ಇಲ್ಲಿನ ವಕೀಲರ ಕುರಿತು ಜನರಲ್ಲಿ ಒಳ್ಳೆಯ ಅಭಿಪ್ರಾಯವಿದೆ. ದೇಶದ ಉತ್ತಮ ವಕೀಲರ ಸಂಘಗಳ ಪೈಕಿ ಬೆಂಗಳೂರು ವಕೀಲರ ಸಂಘ ಮೊದಲ ಸ್ಥಾನದಲ್ಲಿದೆ ಎಂದು ಹೈಕೋರ್ಟ್ ನೂತನ ಮುಖ್ಯ ನ್ಯಾಯಮೂರ್ತಿ ಅಭಯ್ ಶ್ರೀನಿವಾಸ್ ಓಕ್ ಅಭಿಪ್ರಾಯಪಟ್ಟರು.

ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿಯಾಗಿ ನೇಮಕಗೊಂಡ ಹಿನ್ನೆಲೆಯಲ್ಲಿ ಸೋಮವಾರ ಹೈಕೋರ್ಟ್ ಸಭಾಂಗಣದಲ್ಲಿ ಬೆಂಗಳೂರು ವಕೀಲರ ಸಂಘ ಹಮ್ಮಿಕೊಂಡಿದ್ದ ಸ್ವಾಗತ ಸಮಾರಂಭದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ನ್ಯಾಯಾಂಗದಲ್ಲಿ ಏನಾದರೂ ಬದಲಾವಣೆ ತರಬೇಕಾಗಿ ಬಂದಾಗ ಎಲ್ಲರನ್ನೂ ವಿಶ್ವಾಸಕ್ಕೆ ತೆಗೆದುಕೊಂಡು ಹಾಗೂ ನಿಯಮಗಳ ಅನುಸಾರವಾಗಿಯೇ ತೀರ್ಮಾನ ತೆಗೆದುಕೊಳ್ಳುತ್ತೇನೆ. ಅದಕ್ಕೆ ವಕೀಲರ ಸಹಕಾರವೂ ಬೇಕು. ವಕೀಲರ ಸಮಸ್ಯೆಗಳ ಕುರಿತು ನನ್ನಲ್ಲಿ ಮುಕ್ತವಾಗಿ ಚರ್ಚಿಸಬಹುದು. ಸಮಸ್ಯೆಗಳ ಪರಿಹಾರಕ್ಕೆ ನಾನು ಪ್ರಯತ್ನಿಸುತ್ತೇನೆ ಎಂದು ಭರವಸೆ ನೀಡಿದರು.



ಕರ್ನಾಟಕ ರಾಜ್ಯ ವಕೀಲರ ಪರಿಷತ್‌ನಿಂದ ನೂತನ ಮುಖ್ಯ ನ್ಯಾಯಮೂರ್ತಿ ಅಭಯ್ ಶ್ರೀನಿವಾಸ್ ಓಕ್ ಅವರನ್ನು ಸನ್ಮಾನಿಸಲಾಯಿತು.

ಬಾಂಬೆ ಹೈಕೋರ್ಟ್‌ನಂತೆ ಕರ್ನಾಟಕ ಹೈಕೋರ್ಟ್ ಕಟ್ಟಡ ಸಹ ಪಾರಂಪರಿಕ ಹಾಗೂ ಸುಂದರವಾದ್ದು. ಕಟ್ಟಡವನ್ನು ಉತ್ತಮವಾಗಿ ನಿರ್ವಹಣೆ ಮಾಡಲಾಗಿದೆ. ಬೆಂಗಳೂರು ಕೆರೆಗಳು ಮತ್ತು ಉದ್ಯಾನಗಳಿಗೆ ಹೆಸರುವಾಸಿಯಾದ ನಗರ, ನಾನು ಈ ಹಿಂದೆ ಸೇವೆ ಸಲ್ಲಿಸಿದ ಬಾಂಬೆ ಕೆರೆಗಳ ನಗರವಾಗಿತ್ತು. ಬೆಂಗಳೂರಲ್ಲಿ ಇನ್ನೂ ಒಂದಿಷ್ಟು ಕೆರೆಗಳು ಜೀವಂತ ಉಳಿದಿವೆ ಎಂದು ಕೆಲವೊಂದು ವೆಬ್‌ಸೈಟ್‌ಗಳಿಂದ ತಿಳಿದುಕೊಂಡಿದ್ದೇವೆ. ಆದರೆ, ವಾಸ್ತವದಲ್ಲಿ ಎಷ್ಟು ಕೆರೆಗಳು ಉಳಿದಿವೆ ಎಂಬ ಬಗ್ಗೆ ಮಾಹಿತಿ ಪಡೆದುಕೊಳ್ಳುತ್ತೇನೆ ಎಂದು ನ್ಯಾ. ಓಕ್ ಹೇಳಿದರು.

ಬೆಂಗಳೂರು ವಕೀಲರ ಸಂಘದ ಅಧ್ಯಕ್ಷ ಎ.ಪಿ.ರಂಗನಾಥ್, ಪ್ರಧಾನ ಕಾರ್ಯದರ್ಶಿ ಗಂಗಾಧರಯ್ಯ, ಇತರ ಪದಾಧಿಕಾರಿಗಳು ಉಪಸ್ಥಿತರಿದ್ದರು.